**ಕರ್ನಾಟಕ ಸರ್ಕಾರ**

**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

File No: DTE-ADMI0ACM2/ 86 /2021

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:18-09-2021.

**-:: ಸುತ್ತೋಲೆ ::-**

**ವಿಷಯ:** 2021-22ನೇ ಸಾಲಿನ ಪೋಸ್ಟ್ ಡಿಪ್ಲೋಮಾ ಕೋರ್ಸುಗಳಿಗೆ ಪ್ರವೇಶ ಅವಧಿಯನ್ನು ವಿಸ್ತರಿಸುವ ಬಗ್ಗೆ.

**ಉಲ್ಲೇಖ:**
1. ಈ ಕಛೇರಿ ಪ್ರವೇಶಾಧಿಸೂಚನೆ ದಿನಾಂಕ:19-08-2021.
2. ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಬಳ್ಳಾರಿ ಇವರ ಪತ್ರ ಸಂ. ಜಿಪಿಟಿಬಿ/01/ಪ್ರವೇಶ/2021-22, ದಿ:09-09-2021.

-00000000-

2021-22ನೇ ಸಾಲಿನ ಪೋಸ್ಟ್ ಡಿಪ್ಲೋಮಾ ಕೋರ್ಸುಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಸ್ವೀಕರಿಸಿ ಪ್ರವೇಶಾತಿಯನ್ನು ದಿನಾಂಕ:15-09-2021ರ ಒಳಗೆ ಪೂರ್ಣಗೊಳಿಸಲು ಉಲ್ಲೇಖ(1)ರ ಅಧಿಸೂಚನೆಯಲ್ಲಿ ಸೂಚಿಸಲಾಗಿತ್ತು. ಪತ್ರದಲ್ಲಿ ಡಿಪ್ಲೋಮಾ ಪಾಸಾದ ಅಭ್ಯರ್ಥಿಗಳಿಂದ ಕಡಿಮೆ ಅರ್ಜಿಗಳು ಸ್ವೀಕೃತವಾಗಿರುವುದರಿಂದ ಪ್ರವೇಶ ಅವಧಿಯನ್ನು ವಿಸ್ತರಿಸುವಂತೆ ಉಲ್ಲೇಖ(2)ರಲ್ಲಿ ಮನವಿ ಕೋರಿರುತ್ತಾರೆ.

ಈ ಸಂಬಂಧದಲ್ಲಿ ಮನವಿಯನ್ನು ಪರಿಗಣಿಸಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯ ಮೇರೆಗೆ ಅರ್ಹ ಅಭ್ಯರ್ಥಿಗಳಿಂದ **ಅರ್ಜಿ ಸ್ವೀಕರಿಸಲು ಅಂತಿಮ ದಿ:30-09-2021 ರವರೆಗೆ ಅವಧಿಯನ್ನು ವಿಸ್ತರಿಸಿ ಅನುಮತಿ ನೀಡಲಾಗಿದೆ.**

ಮೇಲೆ ನಮೂದಿಸಿರುವಂತೆ ಕೂಡಲೇ ಕ್ರಮ ತೆಗೆದುಕೊಂಡು ಈ ಬಗ್ಗೆ ಸ್ಥಳೀಯವಾಗಿ ಪತ್ರಿಕಾ ಪ್ರಕಟಣೆಯನ್ನು ನೀಡಿ, ನಿಯಮಗಳ ಪ್ರಕಾರ ಪ್ರಿನ್ಸಿಪಾಲರುಗಳು ತಮ್ಮ ಹಂತದಲ್ಲಿಯೇ ಅರ್ಹ ಅಭ್ಯರ್ಥಿಗಳ ಪ್ರವೇಶ ಪ್ರಕ್ರಿಯೆ **ದಿ:30-09-2021** ರ ಒಳಗೆ ಪೂರ್ಣಗೊಳಿಸತಕ್ಕದ್ದು. ಪ್ರಯುಕ್ತ, ಇದನ್ನು ಗಮನದಲ್ಲಿರಿಸಿಕೊಂಡು ನಿಯಮಗಳ ಪ್ರಕಾರ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ. ಕೋವಿಡ್-19 ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ ಸರ್ಕಾರವು ಆಗಿಂದಾಗ್ಗೆ ಹೊರಡಿಸುವ ಮಾರ್ಗಸೂಚಿಗಳನ್ನು ಹಾಗೂ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಸೂಚಿಸಲಾಗಿದೆ.

**ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ.**

ನಿರ್ದೇಶಕರು
ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು

**ಗೆ,**

1. ಪ್ರಿನ್ಸಿಪಾಲರು, ಸರ್ಕಾರಿ ಎಸ್.ಜೆ.ಪಾಲಿಟೆಕ್ನಿಕ್, ಬೆಂಗಳೂರು
2. ಪ್ರಿನ್ಸಿಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಬಳ್ಳಾರಿ
3. ಪ್ರಿನ್ಸಿಪಾಲರು, ಎಂ.ಎಸ್.ರಾಮಯ್ಯ ಪಾಲಿಟೆಕ್ನಿಕ್, ಬೆಂಗಳೂರು
4. ಪ್ರಿನ್ಸಿಪಾಲರು, ರಾಜೀವ್‌ಗಾಂಧಿ ಇನ್‌ಸ್ಟಿಟ್ಯೂಟ್ ಆಫ್ ಸ್ಟೀಲ್ ಟೆಕ್ನಾಲಜಿ, ತೋರಣಗಲ್, ಬಳ್ಳಾರಿ ಜಿಲ್ಲೆ.

**ಸದರಿ ಸುತ್ತೋಲೆಯನ್ನು ಸಂಸ್ಥೆಯ ಸೂಚನಾ ಫಲಕದಲ್ಲಿ ಅಭ್ಯರ್ಥಿಗಳಿಗೆ ಹಾಗೂ ಸಾರ್ವಜನಿಕರ ಮಾಹಿತಿಗಾಗಿ ಪ್ರಕಟಿಸುವುದು ಹಾಗೂ ಸ್ಥಳೀಯ ದಿನಪತ್ರಿಕೆಗಳಲ್ಲಿ ಪ್ರಕಟಣೆ ನಿಡುವುದು.**

Scanned with CamScanner

**ಪ್ರತಿ ಮಾಹಿತಿಗಾಗಿ:-**

1. ಆಯುಕ್ತರವರ ಆಪ್ತಶಾಖೆಗೆ.
2. ನಿರ್ದೇಶಕರವರ ಆಪ್ತಶಾಖೆಗೆ
3. ಇಲಾಖೆಯ ಎಲ್ಲಾ ಜಂಟಿ ನಿರ್ದೇಶಕರುಗಳಿಗೆ.
4. ಇಲಾಖೆಯ ಎಲ್ಲಾ ಅಧಿಕಾರಿಗಳಿಗೆ,
5. ಸಾರ್ವಜನಿಕ ಸಂಪರ್ಕಾಧಿಕಾರಿ, ಕಾಲೇಜು & ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
6. ಇ-ಆಡಳಿತ ವಿಭಾಗಕ್ಕೆ - ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
7. ಡಿವಿಪಿ(2) ವಿಭಾಗಕ್ಕೆ.
8. ಕಛೇರಿ ಪ್ರತಿ.

Scanned with CamScanner